# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1058 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಸಣ್ಣ ಕೈಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 19.12.2018. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಸ್ಥಗಿತಗೊಂಡಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು; | ಬೀದರ್ ಜಿಲ್ಲೆಯಲ್ಲಿ 1854 ಕೈಗಾರಿಕೆಗಳಿವೆ. ಇವುಗಳಲ್ಲಿ 175 ಕೈಗಾರಿಕೆಗಳು ಸ್ಥಗಿತಗೊಂಡಿರುತ್ತವೆ. |
| ಆ) | ಸದರಿ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಎಷ್ಟು ಪ್ರತಿಶತ ನೌಕರಿ ನೀಡಲಾಗಿದೆ; | ಸದರಿ ಕೈಗಾರಿಕೆಗಳಲ್ಲಿ ಶೇ.90 ರಷ್ಟು ಸ್ಥಳೀಯರಿಗೆ ಉದ್ಯೋಗಾವಕಾಶ ನೀಡಲಾಗಿದೆ. |
| ಇ) | ಜಿಲ್ಲೆಯಲ್ಲಿ ಇನ್ನೂ ಹೆಚ್ಚಿನ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರದ ಮುಂದಿನ ಕ್ರಮವೇನು? | 1. "ಕಾಂಪಿಟ್ ವಿತ್ ಚೈನಾ" ಯೋಜನೆಯಡಿಯಲ್ಲಿ ಕೃಷಿ ಉಪಕರಣ ಕ್ಲಸ್ಟರ್ ಘಟಕಗಳನ್ನು ಸ್ಥಾಪಿಸಿ, ಒಟ್ಟು ಒಂದು ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ ಹೊಂದಲಾಗಿದೆ.<br><br>2. ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ. 10.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 25 ರಿಂದ ಶೇ. 35 ರವರೆಗೆ ಗರಿಷ್ಠ ರೂ. 2.50 ಲಕ್ಷದಿಂದ ರೂ. 3.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>3. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ. 25.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ. 35 ರವರೆಗೆ ಗರಿಷ್ಠ ರೂ. 3.75 ಲಕ್ಷದಿಂದ ರೂ. 8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>4. ನಿರುದ್ಯೋಗಿ ಯುವಕ ಯುವತಿಯರಿಗೆ ಉದ್ಯಮ ಶೀಲರಾಗಲು ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ, |

| | | |
|---|---|---|
| | | ಉದ್ಯಮಶೀಲತಾ ಪ್ರೇರಣಾ ಶಿಬಿರ, ಕೊಳ್ಳುವವರ ಮತ್ತು ಮಾರಾಟಗಾರರ ಸಮಾವೇಶ ಮತ್ತು ಕಲಾವೈಭವ ವಸ್ತು ಪ್ರದರ್ಶನಗಳನ್ನು ನಡೆಸಲಾಗುತ್ತಿದೆ.<br><br>5. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳಾ ಉದ್ದಿಮೆದಾರರಿಗೆ ಶೇಕಡಾ 4 ರ ಬಡ್ಡಿ ದರದಲ್ಲಿ ರೂ. 2.00 ಕೋಟಿಯವರೆಗೂ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.<br><br>6. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ರೂ. 5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತೀ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 10 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>7. ಕೈಗಾರಿಕಾ ಪ್ರದೇಶ ಮತ್ತು ಕೈಗಾರಿಕಾ ವಸಾಹತು ಗಳಲ್ಲಿ ಅಭಿವೃದ್ಧಿಪಡಿಸಿದ ಕೈಗಾರಿಕಾ ನಿವೇಶನಗಳನ್ನು ಹಾಗೂ ಮಳಿಗೆಗಳ ಹಂಚಿಕೆ ಮಾಡಲಾಗುತ್ತಿದೆ.<br><br>8. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ. 50 ರ ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಠ 2 ಎಕರೆ) ಮತ್ತು ಶೇ 90 ರ ರಿಯಾಯಿತಿ ದರದಲ್ಲಿ ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.<br><br>9. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಶೇ. 60 ರಷ್ಟು ಸಹಾಯಧನ ನೀಡಲಾಗುತ್ತಿದೆ.<br><br>10. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರು ಬ್ಯಾಂಕ / ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ/ಆಧುನೀಕರಣ/ ತಾಂತ್ರಿಕ ಉನ್ನತೀಕರಣ / ವಿಸ್ತರಣೆ ಚಟುವಟಿಕೆ ಬದಲಾವಣೆ ಘಟಕಗಳಿಗೆ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ / ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ. 50 ರಷ್ಟು ಬಡ್ಡಿ ರಹಿತ ಸಾಫ್ಟ್‌ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>11. ದಿನಾಂಕ 01-04-2017 ರಿಂದ ಮೊದಲ ಬಾರಿಗೆ ಪರಿಶಿಷ್ಟ |

| | | |
|---|---|---|
| | | ಜಾತಿ / ಪರಿಶಿಷ್ಟ ಪಂಗಡದವರು ಸ್ಥಾಪಿಸುವ ಸಣ್ಣ ಮತ್ತು ಅತೀ ಸಣ್ಣ ಘಟಕಗಳೂ ಸಾಲ ಪಡೆಯುವ ಸಂದರ್ಭದಲ್ಲಿ ಕೆ.ಎಸ್.ಎಫ್.ಸಿ. ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಭರಿಸಲಾಗುತ್ತಿದೆ.<br>12. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ಯಮಗಳು ದಿನಾಂಕ: 01-04-2017 ರಿಂದ ಪ್ರಾರಂಭ ವಾಗಿರುವ ಹೊಸ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕಾ ಘಟಕಗಳಿಗೆ ಮೊದಲ 5 ವರ್ಷಗಳ ಅವಧಿಗೆ ಪ್ರತಿ ಯುನಿಟ್‌ಗೆ 2 ರೂ.ಗಳಷ್ಟು ವಿದ್ಯುಚ್ಛಕ್ತಿ ಸಹಾಯಧನ ನೀಡಲಾಗುತ್ತಿದೆ.<br>ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದಿಮೆದಾರರಿಗೆ 2014-19 ಕೈಗಾರಿಕಾ ನೀತಿಯ ಪ್ರಕಾರ ಹಾಗೂ ಕೃಷಿ ವಾಣಿಜ್ಯ ಮತ್ತು ಆಹಾರ ಸಂಸ್ಕರಣಾ ನೀತಿ-2015 ರ ಪ್ರಕಾರ ಕೆಳಕಂಡ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತಿದೆ.<br>1. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕ ರಿಯಾಯಿತಿ.<br>2. ಬಂಡವಾಳ ಹೂಡಿಕೆ ಸಹಾಯಧನ<br>3. ಬಡ್ಡಿ ಸಹಾಯಧನ<br>4. ಭೂ ಪರಿವರ್ತನಾ ಶುಲ್ಕ ಮರುಪಾವತಿ<br>5. ಪ್ರವೇಶ ತೆರಿಗೆ ವಿನಾಯಿತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ಕೃಷಿ ಉತ್ಪನ್ನ ಮಾರುಕಟ್ಟೆ ತೆರಿಗೆಯಿಂದ ವಿನಾಯಿತಿ.<br>8. ತ್ಯಾಜ್ಯ ಸಂಸ್ಕರಣಾ ಘಟಕ ಸ್ಥಾಪನೆಗೆ ಸಹಾಯಧನ.<br>9. ವಿದ್ಯುತ್ ತೆರಿಗೆ ವಿನಾಯಿತಿ.<br>10. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಮತ್ತು ಪೇಟೆಂಟ್ ನೋಂದಣಿ ಸಹಾಯಧನ.<br>11. ಮಳೆ ನೀರು ಕೊಯ್ಲು / ಸಂರಕ್ಷಣೆ ಸಹಾಯಧನ.<br>12. ಶಕ್ತಿ ಸಂರಕ್ಷಣೆ ಸಹಾಯಧನ.<br>13. ಯೋಜನಾ ವರದಿ ತಯಾರಿಕಾ ವೆಚ್ಚ ಮರುಪಾವತಿ<br>14. ಎಸ್.ಸಿ./ಎಸ್.ಟಿ. ಉದ್ಯಮಶೀಲರಿಗೆ ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನ ಹಂಚಿಕೆ ಮಾಡಲಾಗುವುದು. |

**ಸಿಐ 135 ಸಿಎಸ್‌ಸಿ 2018**

[ಎಸ್.ಆರ್. ಶ್ರೀನಿವಾಸ್ (ವಾಸು)]

**ಸಣ್ಣ ಕೈಗಾರಿಕೆ ಸಚಿವರು**

ಎಸ್.ಆರ್. ಶ್ರೀನಿವಾಸ್
ಸಣ್ಣ ಕೈಗಾರಿಕೆಗಳ ಹಾಗೂ
ದಾವಣಗೆರೆ ಜಿಲ್ಲೆ ಉಸ್ತುವಾರಿ ಸಚಿವರು